ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೊಂದನೆಯ ಅಧಿವೇಶನ
ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಯೋಜನೆಗಳು & ಖರ್ಚು ವೆಚ್ಚಗಳ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

634 (772) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಹಾಲಿ ಜಾರಿಯಲ್ಲಿರುವ ಯೋಜನೆಗಳಾವುವು; (ವಿವರವಾದ ಮಾಹಿತಿ ನೀಡುವುದು)

(ಆ) 2019-20ನೇ ಸಾಲಿನಲ್ಲಿ ಅಲ್ಪ ಸಂಖ್ಯಾತರ ಮೂಲಭೂತ ಸೌಕರ್ಯ ನಿರ್ಮಾಣಕ್ಕಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ;ಅದದರಲ್ಲಿ ಖರ್ಚಾಗಿರುವ ಮೊತ್ತ ಎಷ್ಟು ; ಮತ್ತು ಉಳಿದಿರುವ ಮೊತ್ತ ಎಷ್ಟು ;

(ಇ) ಕಳೆದ 3 ವರ್ಷಗಳಲ್ಲಿ ತುಮಕೂರು ಜಿಲ್ಲೆಗೆ ಅಲ್ಪಸಂಖ್ಯಾತರ ಮೂಲಭೂತ ಸೌಕರ್ಯ ನಿರ್ಮಾಣಕ್ಕಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕುವಾರು/ಕಾಮಗಾರಿವಾರು ವಿವರವಾದ ಮಾಹಿತಿ ನೀಡುವುದು)

(ಈ) ಈ ಸಾಲಿನಲ್ಲಿ ತುಮಕೂರು ಜಿಲ್ಲೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ? (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)